ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 10–11–2021

# ಮಾಧ್ಯಮ ಆಮಂತ್ರಣ

# MEDIA INVITATION

**1. 15ನೇ ವಿಧಾನಸಭೆಗೆ ಅಕ್ಟೋಬರ್ 2021ರ ತಿಂಗಳಿನಲ್ಲಿ ನಡೆದ ಉಪಚುನಾವಣೆಯಲ್ಲಿ ಚುನಾಯಿತರಾದ ನೂತನ ಸದಸ್ಯರುಗಳ ಪ್ರಮಾಣ ವಚನ ಸ್ವೀಕಾರ**

ಪ್ರಮಾಣ ವಚನ ಬೋಧನೆ :
ವಿಶ್ವೇಶ್ವರ ಹೆಗಡೆ ಕಾಗೇರಿ
ಮಾನ್ಯ ಅಧ್ಯಕ್ಷರು, ಕರ್ನಾಟಕ ವಿಧಾನ ಸಭೆ.

ಪ್ರಮಾಣ ವಚನ ಸ್ವೀಕರಿಸುವವರು :

1. ಭೂಸನೂರ್ ರಮೇಶ್ ಬಾಳಪ್ಪ – ಸಿಂಧಗಿ ವಿಧಾನ ಸಭಾ ಕ್ಷೇತ್ರ
2. ಮಾನೆ ಶ್ರೀನಿವಾಸ್ – ಹಾನಗಲ್ ವಿಧಾನ ಸಭಾ ಕ್ಷೇತ್ರ

ದಿನಾಂಕ: 11–11–2021, ಗುರುವಾರ, ಸಮಯ : ಬೆಳಿಗ್ಗೆ 11.00 ಗಂಟೆಗೆ
ಸ್ಥಳ : ಸಮ್ಮೇಳನ ಸಭಾಂಗಣ, ಮೂರನೇ ಮಹಡಿ, ವಿಧಾನಸೌಧ, ಬೆಂಗಳೂರು

**2. ಕರ್ನಾಟಕ ಸರ್ಕಾರದ ಕೃಷಿ, ತೋಟಗಾರಿಕೆ, ರೇಷ್ಮೆ, ಜಲಾನಯನ ಅಭಿವೃದ್ಧಿ, ಅರಣ್ಯ, ಪಶುಸಂಗೋಪನೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ, ಗ್ರಾಮೀಣಾಭಿವೃದ್ಧಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಕೃಷಿಮೇಳ–2021**

ಉದ್ಘಾಟಕರು:
ಬಸವರಾಜ ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಮುಖ್ಯ ಅತಿಥಿಗಳು:
ಬಿ.ಸಿ.ಪಾಟೀಲ್,
ಮಾನ್ಯ ಕೃಷಿ ಸಚಿವರು, ಕರ್ನಾಟಕ ಸರ್ಕಾರ ಮತ್ತು ಸಹ ಕುಲಾಧಿಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.

**ಅಧ್ಯಕ್ಷತೆ:**
**ಕೃಷ್ಣ ಬೈರೇಗೌಡ**
**ಮಾನ್ಯ ವಿಧಾನಸಭಾ ಸದಸ್ಯರು, ಬ್ಯಾಟರಾಯನಪುರ ಕ್ಷೇತ್ರ.**

**ದಿನಾಂಕ: 11–11–2021, ಗುರುವಾರ, ಸಮಯ : ಬೆಳಿಗ್ಗೆ 11.00 ಗಂಟೆಗೆ**
**ಸ್ಥಳ : ಗಾಂಧಿ ಕೃಷಿ ವಿಜ್ಞಾನ ಕೇಂದ್ರ (ಜಿ.ಕೆ.ವಿ.ಕೆ), ಬೆಂಗಳೂರು**

**ವಿ.ಸೂ: ಪ್ರಸ್ತುತ ಕಾರ್ಯಕ್ರಮಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ಅಂದು ಬೆಳಿಗ್ಗೆ 10:00 ಗಂಟೆಗೆ ಕಬ್ಬನ್ ಪಾರ್ಕ್ ಆವರಣದಲ್ಲಿರುವ ಪ್ರೆಸ್ ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ. ಹೆಚ್ಚಿನ ಮಾಹಿತಿಗಾಗಿ: ಕೆ. ಶಿವರಾಮ್, ವಾರ್ತಾ ತಜ್ಞರು ಮೋಬೈಲ್ ಸಂಖ್ಯೆ: 99720 35456, 8277810930, ಡಾ.ಎಮ್.ಎ.ಮೂರ್ತಿ, ಸಹಾಯಕ ಪ್ರಾಧ್ಯಾಪಕರು 9535355329 ಸಂಪರ್ಕಿಸಬಹುದಾಗಿದೆ.**

# ಪತ್ರಿಕಾ ಪ್ರಕಟಣೆ

**PRESS RELEASE**

## ನವೆಂಬರ್ 11 ರಂದು ಕೃಷಿಮೇಳ –2021

ಬೆಂಗಳೂರು, ನವೆಂಬರ್ 10 (ಕರ್ನಾಟಕ ವಾರ್ತೆ) :

ಬೆಂಗಳೂರು ಕೃಷಿ ವಿದ್ಯಾನಿಲಯ, ತೋಟಗಾರಿಕೆ, ರೇಷ್ಮೆ, ಜಲಾನಯನ ಅಭಿವೃದ್ಧಿ, ಅರಣ್ಯ, ಪಶುಸಂಗೋಪನೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ, ಗ್ರಾಮೀಣಾಭಿವೃದ್ಧಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನವೆಂಬರ್ 11 ರಿಂದ 14 ರವರೆಗೆ ಕೃಷಿಮೇಳ–2021 ನ್ನು ಗಾಂಧಿ ಕೃಷಿ ವಿಜ್ಞಾನ ಕೇಂದ್ರದಲ್ಲಿ (ಜಿ.ಕೆ.ವಿ.ಕೆ) ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ನವೆಂಬರ್ 11 ರಂದು ಬೆಳಿಗ್ಗೆ 11.00 ಗಂಟೆಗೆ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ ಅವರು ನೆರವೇರಿಸಿ ತುಮಕೂರು ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅತ್ಯುತ್ತಮ ರೈತ ಹಾಗೂ ರೈತ ಮಹಿಳಾ ಪ್ರಶಸ್ತಿಗಳನ್ನು ಪ್ರದಾನ ಮಾಡುವರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬ್ಯಾಟರಾಯನಪುರ ಕ್ಷೇತ್ರದ ವಿಧಾನಸಭಾ ಸದಸ್ಯರಾದ ಕೃಷ್ಣ ಬೈರೇಗೌಡ ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ಕೃಷಿ ಸಚಿವರು ಹಾಗೂ ಕೃಷಿ ವಿಶ್ವವಿದ್ಯಾನಿಲಯದ ಸಹ ಕುಲಾಧಿಪತಿಗಳಾದ ಬಿ.ಸಿ.ಪಾಟೀಲ್, ಅವರು ಭಾಗವಹಿಸಲಿದ್ದಾರೆ.

ಅಪರಾಹ್ನ 2.30 ಗಂಟೆಗೆ ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಗಳ ಜಿಲ್ಲಾ ಮಟ್ಟದ ಅತ್ಯುತ್ತಮ ರೈತ ಹಾಗೂ ರೈತ ಮಹಿಳಾ ಪ್ರಶಸ್ತಿ ಹಾಗೂ ತಾಲ್ಲೂಕು ಮಟ್ಟದ ಅತ್ಯುತ್ತಮ ಯುವ ರೈತ ಹಾಗೂ ರೈತ ಮಹಿಳಾ ಪ್ರಶಸ್ತಿಗಳನ್ನು ಪ್ರದಾನ ಮಾಡುವರು.

ನವೆಂಬರ್ 12 ರಂದು ಮಧ್ಯಾಹ್ನ ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ ಮತ್ತು ರಾಮನಗರ ಜಿಲ್ಲೆಗಳ ಜಿಲ್ಲಾ ಮಟ್ಟದ ಅತ್ಯುತ್ತಮ ರೈತ ಹಾಗೂ ರೈತ ಮಹಿಳಾ ಪ್ರಶಸ್ತಿ ಹಾಗೂ ತಾಲ್ಲೂಕು ಮಟ್ಟದ ಅತ್ಯುತ್ತಮ ಯುವ ರೈತ ಹಾಗೂ ರೈತ ಮಹಿಳಾ ಪ್ರಶಸ್ತಿಗಳನ್ನು ಪ್ರದಾನ ಮಾಡುವರು.

ನವೆಂಬರ್ 13 ರಂದು ಮಧ್ಯಾಹ್ನ ಹಾಸನ, ಮಂಡ್ಯ ಮತ್ತು ಕೋಲಾರ ಜಿಲ್ಲೆಗಳ ಜಿಲ್ಲಾ ಮಟ್ಟದ ಅತ್ಯುತ್ತಮ ರೈತ ಹಾಗೂ ರೈತ ಮಹಿಳಾ ಪ್ರಶಸ್ತಿ, ತಾಲ್ಲೂಕು ಮಟ್ಟದ ಅತ್ಯುತ್ತಮ ಯುವ ರೈತ ಹಾಗೂ ರೈತ ಮಹಿಳಾ ಪ್ರಶಸ್ತಿ ಹಾಗೂ ಅತ್ಯುತ್ತಮ ವೈಜ್ಞಾನಿಕ ಲೇಖನಗಳಿಗೆ ಡಾ. ಆರ್. ದ್ವಾರಕೀನಾಥ್ ಮತ್ತು ಪ್ರೊ. ಬಿ.ವಿ. ವೆಂಕಟರಾವ್ ಪ್ರಶಸ್ತಿಗಳನ್ನು ಪ್ರದಾನ ಮಾಡುವರು.

ನವೆಂಬರ್ 14 ರಂದು ಕಾರ್ಯಕ್ರಮದ ಸಮಾರೋಪ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭವನ್ನು ಗೌರವಾನ್ವಿತ ಅತಿಥಿಗಳಾದ ರಾಜ್ಯದ ಸನ್ಮಾನ್ಯ ರಾಜ್ಯಪಾಲರು ಹಾಗೂ ಕೃಷಿ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ವಹಿಸಲಿದ್ದಾರೆ.

ಅಂದು ಮಾಜಿ ಪ್ರಧಾನಮಂತ್ರಿ ಶ್ರೀ ಹೆಚ್.ಡಿ.ದೇವೇಗೌಡ ರಾಜ್ಯ ಮಟ್ಟದ ಅತ್ಯುತ್ತಮ ರೈತ ಪ್ರಶಸ್ತಿ, ಡಾ.ಎಂ.ಹೆಚ್.ಮರೀಗೌಡ ರಾಜ್ಯ ಮಟ್ಟದ ಅತ್ಯುತ್ತಮ ತೋಟಗಾರಿಕಾ ರೈತ ಪ್ರಶಸ್ತಿ, ಕ್ಯಾನ್‌ಬ್ಯಾಂಕ್ ಅತ್ಯುತ್ತಮ ರೈತ ಪ್ರಶಸ್ತಿ, ಕ್ಯಾನ್‌ಬ್ಯಾಂಕ್ ಅತ್ಯುತ್ತಮ ರೈತ ಮಹಿಳೆ ಪ್ರಶಸ್ತಿ, ಡಾ.ಆರ್. ದ್ವಾರಕೀನಾಥ್ ಅತ್ಯುತ್ತಮ ರೈತ ಪ್ರಶಸ್ತಿ, ಡಾ.ಆರ್. ದ್ವಾರಕಿನಾಥ್ ಅತ್ಯುತ್ತಮ ವಿಸ್ತರಣಾ ಕಾರ್ಯಕರ್ತ ಪ್ರಶಸ್ತಿ, ಡಾ.ಎಂ.ಹೆಚ್.ಮರಿಗೌಡ ರಾಷ್ಟ್ರೀಯ ದತ್ತಿ ಅತ್ಯುತ್ತಮ ತೋಟಗಾರಿಕಾ ಸಂಶೋಧನಾ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

## ವಿಜ್ಞಾನ ಲೇಖಕರ ತರಬೇತಿ ಶಿಬಿರ

ಬೆಂಗಳೂರು, ನವೆಂಬರ್ 10 (ಕರ್ನಾಟಕ ವಾರ್ತೆ) :

ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಹಯೋಗದಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ರಾಜ್ಯದ ಉದಯೋನ್ಮುಖ ಕನ್ನಡ ವಿಜ್ಞಾನ ಬರಹಗಾರರಿಗೆ, ಕಾರ್ಯನಿರತ ವಿಜ್ಞಾನ ಪತ್ರಿಕೋದ್ಯಮಿಗಳು, ವರದಿಗಾರರಿಗೆ ಜನಪ್ರಿಯ ವಿಜ್ಞಾನ ಬರವಣಿಗೆಯ ತರಬೇತಿ ಶಿಬಿರವನ್ನು ಮಂಡ್ಯ ಜಿಲ್ಲೆಯ ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಜ್ಞಾನ ಬರವಣಿಗೆಯಲ್ಲಿ ಆಸಕ್ತಿ ಇರುವ ವಿಜ್ಞಾನ ಶಿಕ್ಷಕರು, ಯುವ ಪತ್ರಿಕಾ ವರದಿಗಾರರು, ಚಿತ್ರ ನಿರೂಪಕರು, ವಿದ್ಯಾರ್ಥಿಗಳು ಶಿಬಿರದಲ್ಲಿ ಭಾಗವಹಿಸಬಹುದಾಗಿದೆ. ಅರ್ಜಿಯನ್ನು ನವೆಂಬರ್ 15 ರೊಳಗೆ ಸಲ್ಲಿಸಬೇಕು.

ತರಬೇತಿ ಶಿಬಿರವು ನವೆಂಬರ್ ಮೂರನೇ ವಾರದಲ್ಲಿ ಮೂರು ದಿನಗಳ ಕಾಲ ನಡೆಯಲಿದೆ. ನುರಿತ ವಿಜ್ಞಾನ ಬರಹಗಾರರು/ ಸಂವಹನಕಾರರಿಂದ ಶಿಬಿರಾರ್ಥಿಗಳಿಗೆ ವಿಜ್ಞಾನ ಬರವಣಿಗೆಯ ಕುರಿತ ವಿವಿಧ ಕೌಶಲ್ಯ, ಆಕರ, ಶಬ್ಧ ಬಳಕೆ, ಅನುವಾದ, ವಿಜ್ಞಾನ ಪತ್ರಿಕೋದ್ಯಮ ಮುಂತಾದ ಅಂಶಗಳಲ್ಲಿ ತರಬೇತಿ ಒದಗಿಸಲಾಗುವುದು.

ತರಬೇತಿ ಶಿಬಿರದಲ್ಲಿ ಭಾಗವಹಿಸಲಿಚ್ಚಿಸುವವರು ಸ್ವವಿವರದೊಂದಿಗೆ ಒಂದು ಸ್ವ ರಚಿತ ಕನ್ನಡ ವೈಜ್ಞಾನಿಕ ಲೇಖನದ ಪ್ರತಿಯೊಂದಿಗೆ ಅರ್ಜಿಯನ್ನು ಗೌರವ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ವಿಜ್ಞಾನ ಭವನ, ನಂ.24/2, 21ನೇ ಮುಖ್ಯರಸ್ತೆ, ಬನಶಂಕರಿ 2ನೇ ಹಂತ, ಬೆಂಗಳೂರು–560070 ಗೆ ಕಳುಹಿಸುವುದು.

ಆಯ್ಕೆಯಾದ ಅಭ್ಯರ್ಥಿಗಳಿಗೆ ನೋಂದಣಿ ಉಚಿತವಾಗಿದ್ದು, ಪರಿಷತ್ತು ಊಟೋಪಚಾರ, ವಾಸ್ತವ್ಯ ಓ.ಓ.ಡಿ ಸೌಲಭ್ಯವನ್ನು ಕಲ್ಪಿಸುವುದು. ತರಬೇತಿ ಶಿಬಿರಕ್ಕೆ 20 ರಿಂದ 45 ವಯೋಮಾನದವರಿಗೆ ಆದ್ಯತೆ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಯೋಜನಾ ಸಹಾಯಕರಾದ ದೇವಿಕಾ ಕೀರ್ತಿ ಮೊಬೈಲ್ ಸಂಖ್ಯೆ: 9449530245 ಹಾಗೂ ಕಛೇರಿ ದೂರವಾಣಿ ಸಂಖ್ಯೆ: 080-26718939/ 9483549159 ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷರ ಸ್ಥಾನಕ್ಕೆ ಚುನಾವಣೆ

ಬೆಂಗಳೂರು, ನವೆಂಬರ್ 10 (ಕರ್ನಾಟಕ ವಾರ್ತೆ) :

ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿ ತೆರವಾಗಿರುವ ಅಧ್ಯಕ್ಷರ ಸ್ಥಾನಕ್ಕೆ ಚುನಾವಣೆಯನ್ನು ನವೆಂಬರ್ 17 ರಂದು ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಕನ್ನಿಂಗ್ ಹ್ಯಾಮ್ ರಸ್ತೆ, ಬೆಂಗಳೂರು ಇಲ್ಲಿ ನಡೆಸಲಾಗುವುದು.

ನಾಮಪತ್ರಗಳನ್ನು ಬೆಳಿಗ್ಗೆ 9.30 ರಿಂದ 10.30 ರವರೆಗೆ ನಾಮಪತ್ರಗಳನ್ನು ಸ್ವೀಕರಿಸಲಾಗುವುದು. ನಂತರ, ಮತದಾನ ಅಗತ್ಯವಿದ್ದಲ್ಲಿ 11:30 ನಂತರ ಚುನಾವಣಾ ಪ್ರಕ್ರಿಯೆ ನಡೆಸಲಾಗುವುದು ಎಂದು ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ಜಲಮಂಡಳಿಯ ವಿವಿಧ ಉಪವಿಭಾಗಗಳಲ್ಲಿ ನೀರಿನ ಅದಾಲತ್

ಬೆಂಗಳೂರು, ನವೆಂಬರ್ 10 (ಕರ್ನಾಟಕ ವಾರ್ತೆ) :

ಬೆಂಗಳೂರು ಜಲಮಂಡಳಿಯ ವತಿಯಿಂದ **(ಪೂರ್ವ)-2-3, (ಪೂರ್ವ)-1-2, (ದಕ್ಷಿಣ-2), (ಆಗ್ನೇಯ-4), (ಪಶ್ಚಿಮ-2), (ನೈರುತ್ಯ-2), (ಆಗ್ನೇಯ-2), (ವಾಯುವ್ಯ-3), (ಕೇಂದ್ರ-2), (ಉತ್ತರ-2), (ಈಶಾನ್ಯ-1) ಮತ್ತು (ಉತ್ತರ ವಿಲೇಜ್-1)** ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದು ಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ನೀರಿನ ಅದಾಲತ್‌ಅನ್ನು ನವೆಂಬರ್ 11, 2021 ಗುರುವಾರ ದಂದು ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುವುದು.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916 ಗೆ ಕರೆಮಾಡಿ ದೂರು ದಾಖಲಿಸಬಹುದು ಹಾಗೂ ವಾಟ್ಸ್‌ಆಪ್ ಸಂಖ್ಯೆ:8762228888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದಾಗಿದೆ. ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಅದಾಲತ್ ಸೌಲಭ್ಯವನ್ನು ಬಳಸಿಕೊಳ್ಳಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ISC-FICCI "ಬೆಸ್ಟ್ ಕಮ್ಯುನಿಕೇಷನ್ ಇನ್ ಸ್ಯಾನಿಟೇಷನ್ 2021" ಪ್ರಶಸ್ತಿ

ಬೆಂಗಳೂರು, ನವೆಂಬರ್ 10 (ಕರ್ನಾಟಕ ವಾರ್ತೆ) :

ನೈರ್ಮಲ್ಯ ಹಾಗೂ ನೀರಿನ ಕುರಿತಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೇರೆ ಬೇರೆ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಆ ಮೂಲಕ ಜನರಲ್ಲಿ ಜಾಗೃತಿ ಮೂಡಿಸುತ್ತಿದೆ. ಅದರಲ್ಲೂ ಸಾಮಾಜಿಕ ಜಾಲತಾಣದ ಮೂಲಕ ಇಲಾಖೆಗೆ ಸಂಬಂಧಪಟ್ಟ ವಿವಿಧ ಕಾರ್ಯಕ್ರಮಗಳು, ಮಾಹಿತಿಗಳನ್ನು ಜನರಿಗೆ ಸುಲಭವಾಗಿ ತಲುಪಿಸುವಂತೆ ಮಾಡುತ್ತಿದೆ.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸ್ವಚ್ಛತಾ ಸುದ್ದಿ, ಇಂಪ್ಯಾಕ್ಟ್ ಸ್ಟೋರಿಸ್, ಥೀಮ್ ವಿಡಿಯೋಗಳು, ಹೀಗೆ ಬೇರೆ ಬೇರೆ ಕ್ರಿಯಾತ್ಮಕ ಚಟುವಟಿಕಗಳ ಮೂಲಕ ಇಲಾಖೆಯ ಯೋಜನೆಗಳ ಕುರಿತಾಗಿ ಜನರಿಗೆ ಮಾಹಿತಿ ನೀಡುವಂತಹ ಕೆಲಸ ಮಾಡುತ್ತಿದೆ.

ಇಲಾಖೆಯ ಈ ಎಲ್ಲಾ ಕಾರ್ಯಗಳನ್ನು ಗುರುತಿಸಿ ISC-FICCI ಬೆಸ್ಟ್ ಕಮ್ಯುನಿಕೇಷನ್ ಇನ್ ಸ್ಯಾನಿಟೇಷನ್ ವಿಭಾಗದಲ್ಲಿ ನೀಡುವ ಪ್ರಶಸ್ತಿಗೆ ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಭಾಜನವಾಗಿದೆ.

ಸಾಮಾಜಿಕ ಮಾಧ್ಯಮದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಈ ಸೇವೆಯನ್ನು ಗುರುತಿಸಿ ISC-FIC ಪ್ರಶಸ್ತಿ ನೀಡಿ ಗೌರವಿಸಿರುವುದಕ್ಕೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಆಯುಕ್ತರಾದ ಡಾ. ಪ್ರಕಾಶ್ ಕುಮಾರ್ ಹೆಚ್ ಎಸ್ ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

**ISC-FICCI "Best Communication in Sanitation 2021" award for Rural Drinking Water and Sanitation Department, Gok**

Bengaluru, 10 Nov (Karnataka Information): The Rural Drinking Water and Sanitation Department runs a variety of water and sanitation programmes to raise awareness among people in rural areas. Various initiatives and information about the department are accessible to the public via social media.

The Rural Drinking Water and Sanitation Department is working towards providing information to people about the department's projects through a variety of dynamic activities such as cleanliness news, impact stories, theme videos, and more.

The Karnataka Rural Drinking Water and Sanitation Department has been honored with the ISC- FICCI 2021, the Best Communication in Sanitation award in the category of Digital Communication.

Dr. Prakash Kumar H.S, Commissioner, Rural Drinking Water and Sanitation Department, has received the award on behalf of the department and expressed happiness and said that this award will motivate us to work more in creating awareness through various channels.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ**

ಬೆಂಗಳೂರು, ನವೆಂಬರ್ 10 (ಕರ್ನಾಟಕ ವಾರ್ತೆ) :

**ದಿನಾಂಕ: 10.11.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 101 | ಸಾಧಾರಣ | $PM_{10}$ & $PM_{2.5}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 151 | ಸಾಧಾರಣ | $PM_{2.5}$ |
| 3 | ಕವಿಕ, ಮೈಸೂರುರಸ್ತೆ | 171 | ಸಾಧಾರಣ | $PM_{2.5}$ |

| | | | | |
|---|---|---|---|---|
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 97 | ತೃಪ್ತಿಕರ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 97 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 87 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 37 | ಉತ್ತಮ | $PM_{10}$ |
| **(10.11.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 76 | ತೃಪ್ತಿಕರ | $PM_{10}$ |
| 9 | ಪೀಣ್ಯ | 57 | ತೃಪ್ತಿಕರ | $PM_{10}$ |
| 10 | ಬಿಟಿಎಂ ಲೇಔಟ್ | 91 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 10.11.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 101 | Moderate | $PM_{10}$ & $PM_{2.5}$ |
| 2 | Jayanagar 5th Block, Shalini ground | 151 | Moderate | $PM_{2.5}$ |
| 3 | KAVIKA, Mysore Road | 171 | Moderate | $PM_{2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 97 | Satisfactory | $PM_{10}$ |
| 5 | HSR Layout, near Central Silkboard | 97 | Satisfactory | $PM_{10}$ |

| | | | | |
|---|---|---|---|---|
| 6 | City Railway Station, Magestic, Bengaluru | 87 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 37 | Good | $PM_{10}$ |
| **(10.11.2021 at 10.05 AM)** | | | | |
| 8 | BWSSB, Kadabesanahalli | 76 | Satisfactory | $PM_{10}$ |
| 9 | Peenya | 57 | Satisfactory | $PM_{10}$ |
| 10 | BTM Layout | 91 | Satisfactory | CO |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older adults | Severe (>401) | Respiratory effects even on healthy people |